ಹೋದರೂ ಕೂಡ ನಮ್ಮ ಮೇಲೆಯೇ ಒಂದು ರೀತಿ ಮಾಡುತ್ತೀರಲ್ಲ? ನಿಮಗೆ ಕೊಡಗು ಕೇವಲ ನೀರು ಬರುವುದಕ್ಕೆ ಮಾತ್ರ ಬೇಕು, ಬೇರೆಯದಕ್ಕೆ ಬೇಡ.

ಶ್ರೀ ಸಿದ್ದರಾಮಯ್ಯ : ಕರ್ನಾಟಕಕ್ಕೆ ಅನ್ಯಾಯವಾಗಿದೆ.

ಅಧ್ಯಕ್ಷರು : ವಿರೋಧ ಪಕ್ಷದ ನಾಯಕರೆ, ಸಭೆಯ ಮುಂದಿಡಲಾಗುವ ಕಾಗದ ಪತ್ರಗಳನ್ನು ಮಂಡಿಸುವ ವಿಷಯವಿದೆ. ಈಗ ಅದನ್ನು ತೆಗೆದುಕೊಳ್ಳುತ್ತೇನೆ.

ಶ್ರೀ ಸಿದ್ದರಾಮಯ್ಯ : ಆಯಿತು.

3. ಸಭೆಯ ಮುಂದಿಡಲಾದ ಕಾಗದ ಪತ್ರಗಳು :

ಸಭೆಯ ಮುಂದಿಡಲಾದ ಕಾಗದ ಪತ್ರಗಳ ಪಟ್ಟಿ (ಎರಡನೇ ಪಟ್ಟಿ)

I. ಶ್ರೀ ಡಿ.ವಿ. ಸದಾನಂದಗೌಡ, (ಮಾನ್ಯ ಮುಖ್ಯಮಂತ್ರಿಯವರು) : ಮಾನ್ಯ ಅಧ್ಯಕ್ಷರೇ,

1999ರ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕತೆ ಅಧಿನಿಯಮದ ಕಲಂ 25(2)ರ ಮೇರೆಗೆ:

1) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಬೆಂಗಳೂರು ಇದರ ಎಲ್ಲಾ ಸಂಗ್ರಹಣೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ, ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ ಸಂಗ್ರಹಿಸತಕ್ಕದೆಂದು ದಿನಾಂಕ: 22.08.2011 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಸಿಆಸುಇ:2:ಇಸಂಗ್ರ:2011.

2) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇದರ ರೂ.1.00 ಲಕ್ಷಕ್ಕೂ (ಒಂದು ಲಕ್ಷ) ಮೀರಿದ ಎಲ್ಲಾ ಸಂಗ್ರಹಣೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ, ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ ಸಂಗ್ರಹಿಸತಕ್ಕದೆಂದು ದಿನಾಂಕ: 09.09.2011 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ:ಸಿಆಸುಇ:2:ಇಸಂಗ್ರ:2011(2).

3) ಪ್ರಾಚ್ಯ ವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಬೆಂಗಳೂರು ಇದರ ಎಲ್ಲಾ ಸಂಗ್ರಹಣೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ ಸಂಗ್ರಹಿಸತಕ್ಕದೆಂದು ದಿನಾಂಕ: 09.09.2011 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಸಿಆಸುಇ:2:ಇಸಂಗ್ರ:2011(1).

4) ಜಲಾನಯನ ಅಭಿವೃದ್ಧಿ ಇಲಾಖೆ, ಬೆಂಗಳೂರು ಇದರ ರೂ.1.00(ಒಂದು) ಲಕ್ಷಕ್ಕೂ ಮೀರಿದ ಎಲ್ಲಾ ಸಂಗ್ರಹಣೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ, ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ ಸಂಗ್ರಹಿಸ ತಕ್ಕದೆಂದು ದಿನಾಂಕ: 21.10.2011 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ:ಸಿಆಸುಇ:2:ಇಸಮಗ್ರ:2011(1).

5) ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕಾ ನಿಗಮ ನಿಯಮಿತ, ಬೆಂಗಳೂರು ಇದರ ರೂ.1.00 (ಒಂದು) ಲಕ್ಷಕ್ಕೂ ಮೀರಿದ ಎಲ್ಲಾ ಸಂಗ್ರಹಣೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ, ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ ಸಂಗ್ರಹಿಸತಕ್ಕದೆಂದು ದಿನಾಂಕ: 21.10.2011 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ:ಸಿಆಸುಇ:2:ಇಸಂಗ್ರ:2011(2).

6) ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು ಇದರ ರೂ.1.00 (ಒಂದು) ಲಕ್ಷಕ್ಕೂ ಮೀರಿದ ಎಲ್ಲಾ ಸಂಗ್ರಹಣೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ, ವಿದ್ಯುನ್ಮಾನ ಸಂಗ್ರಹಣೆ ವೇದಿಕೆ ಮೂಲಕ ಸಂಗ್ರಹಿಸತಕ್ಕದೆಂದು ದಿನಾಂಕ: 21.11.2011 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ:ಸಿಆಸುಇ:2:ಇಸಂಗ್ರ:2011.

1978ರ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮ 8(3)ರ ಮೇರೆಗೆ:

7) ಕರ್ನಾಟಕ ಸಿವಿಲ್ ಸೇವೆಗಳು (ಸೇವೆಗಳು ಮತ್ತು ಕನ್ನಡ ಭಾಷಾ ಪರೀಕ್ಷೆಗಳು) ನಿಯಮ 1974ರ ಷೆಡ್ಯೂಲ್ I ಮತ್ತು II ನ್ನು ತಿದ್ದುಪಡಿ ಮಾಡಿ ದಿನಾಂಕ: 23.12.2011 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಸಿಆಸುಇ: 4:ಎಸ್ಎಸ್ಆರ್: 2009ಗಳನ್ನು ಮಂಡಿಸುತ್ತೇನೆ.

II ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

(ಶ್ರೀ ಆರ್. ಅಶೋಕ್, ಮಾನ್ಯ ಗೃಹ ಮತ್ತು ಸಾರಿಗೆ ಸಚಿವರ ಪರವಾಗಿ) :

1978 ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮ 8(3)ರ ಮೇರೆಗೆ:

ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮ 1978ರ ಅನುಬ್ಬೇದ (3ರ ಉಪ ಅನುಬ್ಬೇದ ನೇಮಕಾತಿ) ನಿಯಮ 2011ನ್ನು ರಚಿಸಿ ದಿನಾಂಕ: 4.2.2012 ರಂದು ಹೊರಡಿಸಿರುವ ಅಧಿಸೂಚನೆ ಸಂಖ್ಯೆ:ಒಇ:56: ಪೊಸಿಅ:2011ನ್ನು ಮಂಡಿಸುತ್ತೇನೆ.

III ಶ್ರೀ ಗೋವಿಂದ ಎಂ. ಕಾರಜೋಳ, ಮಾನ್ಯ ಸಣ್ಣ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು: ಮಾನ್ಯ ಅಧ್ಯಕ್ಷರೇ,

2010ರ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮದ ಕಲಂ 25(2)ರ ಮೇರೆಗೆ:

2010ರ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ ನಿಯಮ ಗಳನ್ನು ರಚಿಸಿ ದಿನಾಂಕ: 24.3.2011 ರಂದು ಹೊರಡಿಸಲಾದ ಅಧಿಸೂಚನೆ ಸಂಖ್ಯೆ: ಕಸಂವಾಪ್ರ:14:ಕೆಒಎಲ್:2011ನ್ನು ಮಂಡಿಸುತ್ತೇನೆ.

(ಮೊದಲನೇ ಪಟ್ಟಿ)

I ಶ್ರೀ ಡಿ.ವಿ. ಸದಾನಂದಗೌಡ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೇ,

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಕಾಯ್ದೆ 1951ರ ಕಲಂ 37(7)ರ ಪ್ರಕಾರ:

1. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ 2010–11ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

1984ರ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(7)ರ ಪ್ರಕಾರ

1. ಶ್ರೀ ಬಿ.ಎನ್. ಚಂದ್ರಶೇಖರಯ್ಯ, ನಿವೃತ್ತ ಪ್ರಧಾನ ಇಂಜಿನಿಯರ್ ಹಾಗೂ ಶ್ರೀ ವಿ.ಪುಷ್ಪರಾಜು, ನಿವೃತ್ತ ತಾಂತ್ರಿಕ ಸಹಾಯಕರು, ರಾಷ್ಟ್ರೀಯ ಹೆದ್ದಾರಿಗಳು, ಬೆಂಗಳೂರು ಇವರುಗಳ ಸಂಬಂಧವಾಗಿ ಮಾನ್ಯ ಲೋಕಾಯುಕ್ತರವರು ಮಾಡಿರುವ ವಿಶೇಷ ವರದಿ.

ಕಂಪನಿ ಅಧಿನಿಯಮ 1956 ಪರಿಚ್ಛೇದ 227(4)ನೇ ಪ್ರಕರಣದ ಮೇರೆಗೆ:

1. ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ

ಕಂಪನಿ ಕಾಯ್ದೆ 1956 ಕಲಂ 619(ಎ)(3)ರ ಮೇರೆಗೆ

1. ಕೊಂಕಣ ರೈಲ್ವೆ ಕಾರ್ಪೊರೇಷನ್‌ನ 2010–11ನೇ ಸಾಲಿನ ವಾರ್ಷಿಕ ವರದಿ.

ಕರ್ನಾಟಕ ವಿಶ್ವ ವಿದ್ಯಾಲಯಗಳ ಅಧಿನಿಯಮ 2000ದ ಕಲಂ 50(2)ರ ಮೇರೆಗೆ :

1. ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ ಇದರ 2008–09ನೇ ಸಾಲಿನ ಲೆಕ್ಕಪರಿಶೋಧನೆಯ ಅನುಸರಣಾ ವರದಿ ಮತ್ತು 2009–10ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ವರದಿಯನ್ನು ಮಂಡಿಸುತ್ತೇನೆ.

II. ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) : ಮಾನ್ಯ ಅಧ್ಯಕ್ಷರೇ,

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ ಅಧಿನಿಯಮ 48(5)ರ ಪ್ರಕರಣವಾದ ಮೇರೆಗೆ:

1. ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದ 2010–11ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

1956ರ ಕಂಪನಿ ಅಧಿನಿಯಮ 619(ಎ)ನೇ ಪ್ರಕರಣದ ಮೇರೆಗೆ:

1. ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

III ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು) : ಮಾನ್ಯ ಅಧ್ಯಕ್ಷರೇ,

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 300(5)ನೇ ಪ್ರಕರಣದ ಮೇರೆಗೆ:

1. ಯಾದಗಿರಿ ಜಿಲ್ಲಾ ಪಂಚಾಯತ್‌ನ 2010–11ನೇ ಸಾಲಿನ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುತ್ತೇನೆ.

IV ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

(ಶ್ರೀ ಆರ್. ಅಶೋಕ್ ಗೃಹ ಮತ್ತು ಸಾರಿಗೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ,

ವಿಚಾರಣಾ ಆಯೋಗದ ಕಾಯ್ದೆ 1952ರ ಕಲಂ 3(4)ರ ಮೇರೆಗೆ:

1. ಕಾಡುಗಳ್ಳ ವೀರಪ್ಪನ್‌ನಿಂದ ಅಪಹರಿಸಲ್ಪಟ್ಟ ಶ್ರೀ ಹೆಚ್. ನಾಗಪ್ಪ, ಮಾಜಿ ಸಚಿವರು ಇವರ ಹತ್ಯೆಗೆ ಕಾರಣವಾದ ಸನ್ನಿವೇಶಗಳ ಬಗ್ಗೆ ನ್ಯಾಯಮೂರ್ತಿ ಶ್ರೀ ಆರ್.ಜಿ. ವೈದ್ಯನಾಥನ್‌ರವರ ವಿಚಾರಣಾ ಆಯೋಗದ ವರದಿಯನ್ನು ಮಂಡಿಸುತ್ತೇನೆ.

V ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

(ಕುಮಾರಿ ಶೋಭಾ ಕರಂದ್ಲಾಜೆ ಇಂಧನ ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರ ಪರವಾಗಿ) ಮಾನ್ಯ ಅಧ್ಯಕ್ಷರೇ,

1956ರ ಕಂಪನಿಗಳ ಅಧಿನಿಯಮದ 619(ಎ)ನೇ ಪ್ರಕರಣದ ಮೇರೆಗೆ:

1. ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿ ಶೋಧನಾ ವರದಿಯನ್ನು ಮಂಡಿಸುತ್ತೇನೆ.

VI ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

(ಶ್ರೀ ಉಮೇಶ್ ವಿ. ಕತ್ತಿ ಕೃಷಿ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ,

1956ರ ಕಂಪನಿ ಅಧಿನಿಯಮ 619ಎರ ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಸೋಧನಾ ವರದಿ.
2. ಕರ್ನಾಟಕ ತೊಗರಿ ಅಭಿವೃದ್ಧಿ ಮಂಡಳಿ ನಿಯಮಿತ, ಗುಲ್ಬರ್ಗಾ ಇದರ 2010–11ನೇ ಸಾಲಿನ ವಾರ್ಷಿಕ ವರದಿ ಯನ್ನು ಮಂಡಿಸುತ್ತೇನೆ.

VII. ಶ್ರೀ ಬಸವರಾಜ್ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) : ಮಾನ್ಯ ಅಧ್ಯಕ್ಷರೇ,

1956ರ ಕಂಪನಿ ಅಧಿನಿಯಮ 619(ಎ)(2)ರ ಪ್ರಕರಣದ ಮೇರೆಗೆ:

1. ಕಾವೇರಿ ನೀರಾವರಿ ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

VIII ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

(ಶ್ರೀ ಎಸ್.ಎ.ರವೀಂದ್ರನಾಥ್ ಸಕ್ಕರೆ ಮತ್ತು ತೋಟಗಾರಿಕೆ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ,

1956ರ ಕಂಪನಿ ಅಧಿನಿಯಮ 619ಎ(2)ರ ಪ್ರಕರಣದ ಮೇರೆಗೆ:

1. ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
2. ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ.
3. ಕರ್ನಾಟಕ ರಾಜ್ಯ ಕೈಗಾರಿಕಾ ಮತ್ತು ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

IX ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

(ಶ್ರೀ ಸಿ.ಎಂ. ಉದಾಸಿ ಲೋಕೋಪಯೋಗಿ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ,

1956ರ ಕಂಪನಿ ಅಧಿನಿಯಮ 619ಎ(2)ರ ಪ್ರಕರಣದ ಮೇರೆಗೆ:

1. ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

X ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

(ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ,

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಕಾಯ್ದೆ ಸೆಕ್ಷನ್ 25(3)ರ ಪ್ರಕರಣದ ಮೇರೆಗೆ:

1. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

XI ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)

(ಶ್ರೀ ಆರ್. ವರ್ತೂರ್ ಪ್ರಕಾಶ್ ಜವಳಿ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ,

1956ರ ಕಂಪನಿ ಅಧಿನಿಯಮದ 619(ಎ)(2) ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಜವಳಿ ಮೂಲಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ.

XII. ಶ್ರೀ ಸಿ.ಪಿ. ಯೋಗೇಶ್ವರ್ (ಅರಣ್ಯ ಸಚಿವರು) : ಮಾನ್ಯ ಅಧ್ಯಕ್ಷರೇ,

1956ರ ಕಂಪನಿಗಳ ಅಧಿನಿಯಮ 619(4)ರ ಮೇರೆಗೆ :

1. ಕರ್ನಾಟಕ ಅರಣ್ಯ ಅಭಿವೃದ್ಧಿ ನಿಗಮ ನಿಯಮಿತದ 2010–11ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

4. ವರದಿಯನ್ನು ಮಂಡಿಸುವುದು :

ಕಾರ್ಯದರ್ಶಿ (ಕರ್ನಾಟಕ ವಿಧಾನಸಭೆ) : ಮಾನ್ಯ ಅಧ್ಯಕ್ಷರೆ, ಕಳೆದ ಅಧಿವೇಶನದಲ್ಲಿ ಒಪ್ಪಿಸಿದ ವರದಿಯ ನಂತರ ರಾಷ್ಟ್ರಾಧ್ಯಕ್ಷರು ಅಥವಾ ರಾಜ್ಯಪಾಲರಿಂದ ಸಂದರ್ಭಾನುಸಾರವಾಗಿ ಒಪ್ಪಿಗೆಯನ್ನು ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದಿಡುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು. **(ಅನುಬಂಧ–II)**